CW.1 PW.1

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ., ಕನಕಪುರ ರವರ ನ್ಯಾಯಾಲಯದಲ್ಲಿ**

# CC No.793/2018

| | |
|---|---|
| ಸಾಕ್ಷಿದಾರರ ಹೆಸರು | ಈರಯ್ಯ |
| ತಂದೆಯ ಹೆಸರು | ಈರಮಾದೇಗೌಡ |
| ವಯಸ್ಸು | 49 ವರ್ಷ |
| ವೃತ್ತಿ | ಕೂಲಿ |
| ವಿಳಾಸ | ಹುನುಮನಹಳ್ಳಿ |
| ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ | 18.08.2025 |

**<u>ಮುಖ್ಯ ವಿಚಾರಣೆ ಎ ಪಿ ಪಿ ರವರಿಂದಃ-</u>**

ಆರೋಪಿ ಪರಿಚಯ ಇರುವುದಿಲ್ಲ. ಚಾಸಾ-5, ಚಾಸ-7 ರವರ ಪರಿಚಯ ಇದೆ. ಉಳಿದವರು ನನಗೆ ಗೊತ್ತಿರುವುದಿಲ್ಲ.

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಈ ಸಂಬಂಧ ಯಾವುದೇ ದೂರು ಮತ್ತು ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

ನಾನು ಸುಮಾರು 10 ರಿಂದ 15 ವರ್ಷಗಳ ಹಿಂದೆ ಪೋಲೀಸ್ ಠಾಣೆಗೆ ಬೇರೆ ಯಾವುದೋ ಕೆಲಸದ ಮೇರೆಗೆ ಹೋದಾಗ ಅಲ್ಲಿ 2-3 ಖಾಲಿ ಬಿಳಿಯ ಹಾಳೆಗಳಿಗೆ ನನ್ನ ಸಹಿ ಪಡೆದುಕೊಂಡಿರುತ್ತಾರೆ. ನನಗೆ ಯಾವುದಕ್ಕೆ ಮತ್ತು ಯಾವ ಕಾರಣಕ್ಕೆ ಸಹಿ ಪಡೆದಿರುತ್ತಾರೆ ಎಂದು ಗೊತ್ತಿಲ್ಲ.

ಸಾಕ್ಷಿಗೆ ಸದರಿ ಪ್ರಕರಣದ ದೂರನ್ನು ತೋರಿಸಲಾಗಿ ಸಾಕ್ಷಿಯು ಕೇವಲ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ಈಗ ನಿಪಿ-1 ಎಂದು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ನನ್ನನ್ನು ಪೋಲೀಸರು ಯಾವುದೇ ಪಂಚನಾಮೆಗೆ ಕರೆದಿರಲಿಲ್ಲ ಹಾಗೂ ನನ್ನ ಮುಂದೆ ಯಾವುದೇ ಪಂಚನಾಮೆ ಮಾಡಿರುವುದಿಲ್ಲ.

ಸಾಕ್ಷಿಗೆ ಸದರಿ ಪ್ರಕರಣದ ಸ್ಥಳ ಪಂಚನಾಮೆಯನ್ನು ತೋರಿಸಲಾಗಿ ಸಾಕ್ಷಿಯು ಕೇವಲ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ಈಗ ನಿಪಿ-2 ಎಂದು ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿದಾರ ಪ್ರತಿಕೂಲ ಸಾಕ್ಷಿ ನುಡಿದ ಕಾರಣ ಸ.ಸ ಅ ರವರು ಸಾಕ್ಷಿಯನ್ನು ವಾಟೀ ಸವಾಲನ್ನು ಮಾಡಲು ಅನುಮತಿ ನೀಡಲು ಕೋರಿದ ಮೇರೆಗೆ ಅನುಮತಿ ನೀಡಲಾಯಿತು).**

**ವಾಟೀ ಸವಾಲುಃ ಸ. ಸ. ಅ. ರವರಿಂದ**

ನಾನು ದಿನಾಂಕ 08.02.2017 ರಂದು ನಾನು ಠಾಣೆಗೆ ಹೋಗಿ ದಿನಾಂಕ 07.02.2017 ರಂದು ನಡೆದ ಅಪಘಾತದ ಸಂಬಂಧ ಈಗ ಸವಿಸ್ತಾರವಾಗಿ ಓದಿ ಹೇಳಿದಂತೆ ನಾನು ಪೋಲೀಸರಿಗೆ ಆರೋಪಿಯ ವಿರುದ್ಧ ದೂರನ್ನು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ.

ಅದೇ ರೀತಿ ದಿನಾಂಕ 08.02.2017 ರಂದು ಕನಕಪುರ ಟೌನ್ ಎನ್ ಹೆಚ್ 209 ಕನಕಪುರ-ಸಾತನೂರು ರಸ್ತೆಯಲ್ಲಿ ನಾರಾಯಣಪ್ಪನಕೆರೆಯ ಬಳಿ ಇರುವ ಗಡಸಹಳ್ಳಿ - ಹನುಮನಹಳ್ಳಿ ವೆಂಕಟರಮಣದೊಡ್ಡಿ ರಸ್ತೆಯ ಬಳಿ ಇರುವ ಕ್ರಾಸ್ ಹತ್ತಿರ ನಾನು ತೋರಿಸಿದ ಸ್ಥಳದಲ್ಲಿ ಚಾಸಾ-2 ಮತ್ತು 3 ರವರ ಸಮಕ್ಷಮ ಮಧ್ಯಾಹ್ನ 1.15 ಗಂಟೆಯಿಂದ 2.15 ಗಂಟೆಯವರೆಗೂ ಸ್ಥಳ ಮಹಜರ್ ಮಾಡಿ ಈಗ ವಿವರವಾಗಿ ಓದಿ ಹೇಳಿದಂತೆ ಸ್ಥಳ ಪಂಚನಾಮೆಯನ್ನು ತಯಾರಿಸಿ ನಮ್ಮಗಳ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಅದೇ ರೀತಿ ದಿನಾಂಕ 20.02.2017 ರಂದು ಈಗ ಸವಿಸ್ತಾರವಾಗಿ ಓದಿ ಹೇಳಿದಂತೆ ಹೇಳಿಕೆಯನ್ನು ಕೊಟ್ಟಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಯು ನಿರಾಕರಿಸಿದ ಹೇಳಿಕೆಯ ದಾಖಲೆಯನ್ನು ನಿಪಿ-

3 ಎಂದು ಗುರುತಿಸಲಾಯಿತು. ನಾನು ಮತ್ತು ಆರೋಪಿ ರಾಜಿ ಮಾಡಿಕೊಂಡಿರುತ್ತೇವೆಂನದರೆ ಸರಿ. ಆದ್ದರಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಏನೂ ಇರುವುದಿಲ್ಲ**

**ಮರುವಿಚಾರಣೆಃ ಇರುವುದಿಲ್ಲ**

**ಓ ಹೇ ಕೇ ಸರಿ ಇದೆ**

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ.,**

**ಕನಕಪುರ .**